<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ:- ಶ್ರೀ ಹನುಮಂತರೆಡ್ಡಿ, ಅಂದಿನ ಕಾರ್ಯದರ್ಶಿ, ನಿಡಗುಂದ ಗ್ರಾಮ ಪಂಚಾಯತಿ, ಚಿಂಚೋಳಿ ತಾಲ್ಲೂಕು ಹಾಗೂ ಶ್ರೀ ರೇವಣಸಿದ್ಧಪ್ಪ ಹಗರಗಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿಂಚೋಳಿ ಇವರುಗಳ ವಿರುದ್ಧ ಶಿಸ್ತು ಕ್ರಮ – ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸುವ ಬಗ್ಗೆ - ಆದೇಶ.

ಓದಲಾಗಿದೆ:-
1) ಉಪ ನಿಬಂಧಕರು ವಿಚಾರಣೆಗಳು-3, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. Compt/ Uplok/ GLB-234 /2010/ ARE-3 ದಿನಾಂಕ. 02.08.2016.
2) ಮಾನ್ಯ ಉಪ ಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ Compt/ Uplok/ GLB-234 / 2010/ARE-3 ದಿನಾಂಕ. 22.07.2016.

-----

<u>ಪ್ರಸ್ತಾವನೆ</u>

ಉಪ ನಿಬಂಧಕರು ವಿಚಾರಣೆಗಳು-3, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 02.08.2016ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತ-1ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತ-1ರವರು ಲೋಕಾಯುಕ್ತ ಕಾಯ್ದೆ ಕಲಂ 12 (3)ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ಶ್ರೀನಿವಾಸ ಹಣಮಯ್ಯ ಕಾವಲಿಕಾರ ಸಾ// ನಿಡಗುಂದಾ, ಚಿಂಚೋಳಿ ತಾಲ್ಲೂಕು, ಕಲಬುರಗಿ ಜಿಲ್ಲೆ ಇವರು ನಿಡಗುಂದಾ ಗ್ರಾಮದಲ್ಲಿ ಗ್ರಾಮಸ್ವರಾಜ್ ಯೋಜನೆಯಡಿಯಲ್ಲಿ ಕೈಗೊಳ್ಳಲಾದ ಸಿಸಿ ರಸ್ತೆಯನ್ನು ಕಳಪೆಯಾಗಿ ನಿರ್ವಹಿಸಿ ಈ ಕೆಳಕಂಡವರು ದುರ್ನಡತೆ ಎಸಗಿರುತ್ತಾರೆಂದು ಕರ್ನಾಟಕ ಲೋಕಾಯುಕ್ತ ಕಚೇರಿಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ:-

1. ಶ್ರೀ ಸೈಯದ್ ವಾಜಿದ್ ಅಲಿಸವರ್, ಅಧ್ಯಕ್ಷರು, ನಿಡಗುಂದ ಗ್ರಾಮ ಪಂಚಾಯತಿ, ಚಿಂಚೋಳಿ ತಾಲ್ಲೂಕು
2. ಶ್ರೀ ಹನುಮಂತ ರೆಡ್ಡಿ, ಅಂದಿನ ಕಾರ್ಯದರ್ಶಿ, ನಿಡಗುಂದ ಗ್ರಾಮ ಪಂಚಾಯತಿ, ಚಿಂಚೋಳಿ ತಾಲ್ಲೂಕು.

3. ಶ್ರೀ ರೇವಣಸಿದ್ದಪ್ಪ ಹಗರಗಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿಂಚೋಳಿ.

ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ಆಪಾದಿತರಿಂದ ಆಕ್ಷೇಪಣೆಯನ್ನು ಪಡೆಯಲಾಗಿದ್ದು, ಆಪಾದಿತರು ತಮ್ಮ ವಿರುದ್ಧ ಮಾಡಿರುವ ಆಪಾದನೆಗಳನ್ನು ಅಲ್ಲಗಳೆದಿರುತ್ತಾರೆಂದು ತಿಳಿಸಿರುತ್ತಾರೆ.

ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿಂಚೋಳಿ ರವರ ದಿನಾಂಕ 28.08.2009ರ ಪತ್ರದಲ್ಲಿ ನಿಡಗುಂದಾ ಗ್ರಾಮದಲ್ಲಿ ನಿರ್ವಹಿಸಲಾದ ಸಿ.ಸಿ. ರಸ್ತೆ ಕಾಮಗಾರಿಯ ಪೈಕಿ 32.10ಮೀಟರ್ ಸಿ.ಸಿ. ರಸ್ತೆಯನ್ನು ಸ್ಪೆಶಿಫಿಕೇಶನ್ ಪ್ರಕಾರ ನಿರ್ವಹಿಸದೇ ಥಿಕನೆಸ್ (ದಪ್ಪ) ಕಡಿಮೆ ಇರುವುದಾಗಿ ಹಾಗೂ ಸದರಿ ಕಾಮಗಾರಿಗೆ ಕಪ್ಪು ಮಣ್ಣನ್ನು ಉಪಯೋಗಿಲಾಗಿದೆಯೆಂದು, ಸದರಿ ಕಾಮಗಾರಿಯನ್ನು ಕಳಪೆಯಾಗಿ ನಿರ್ವಹಿಸಿ ಸರ್ಕಾರಕ್ಕೆ ಉಂಟಾಗಿರುವ ಆರ್ಥಿಕ ನಷ್ಟದ ನೈಜ ಮೊತ್ತವನ್ನು ಲೆಕ್ಕಾಚಾರ ಮಾಡದೇ ಗುತ್ತಿಗೆದಾರರಿಗೆ ಪಾವತಿಸಲಾದ ಬಿಲ್ಲಿನಲ್ಲಿ ರೂ. 3,000/-ಗಳನ್ನು ಮಾತ್ರ ಕಡಿತಗೊಳಿಸಿದ್ದಾರೆಂದು ವರದಿ ಮಾಡಿರುತ್ತಾರೆಂದು ತಿಳಿಸಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತ-1ರವರು ಪ್ರಕರಣಕ್ಕೆ ಸಂಬಂಧಿಸಿದಂತೆ ಆಪಾದಿತರು ಸಲ್ಲಿಸಿರುವ ಆಕ್ಷೇಪಣೆಗಳು ಮತ್ತು ದಾಖಲಾತಿಗಳನ್ನು ಪರಿಶೀಲಿಸಿದ್ದು, ಪ್ರಕರಣದಲ್ಲಿ ಭಾಗಿಯಾಗಿರುವ 3 ಜನ ಆಪಾದಿತರು ನಿಡಗುಂದಾ ಗ್ರಾಮದಲ್ಲಿ ನಿರ್ವಹಿಸಲಾದ ಸಿ.ಸಿ. ರಸ್ತೆ ಕಾಮಗಾರಿಯನ್ನು ಮಂಜೂರಾದ ಅಂದಾಜಿನಂತೆ ನಿರ್ವಹಿಸದೇ ಕಳಪೆಯಾಗಿ ನಿರ್ವಹಿಸಿ ಸರ್ಕಾರಕ್ಕೆ ಉಂಟಾಗಿರುವ ಆರ್ಥಿಕ ನಷ್ಟದ ನೈಜ ಮೊತ್ತವನ್ನು ಗುತ್ತಿಗೆದಾರರಿಗೆ ಪಾವತಿಸಲಾದ ಬಿಲ್ಲಿನಲ್ಲಿ ಕಟಾಯಿಸದೇ ದುರ್ನಡತೆ ಎಸಗಿದ್ದಾರೆಂದು, ಸದರಿಯವರುಗಳು ಸಾರ್ವಜನಿಕ ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ತೋರದೆ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯ ಲೋಪ ಎಸಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಅವರುಗಳ ವಿರುದ್ಧದ ಶಿಸ್ತು ಕ್ರಮ ಕೈಗೊಳ್ಳಲು ಅವಶ್ಯವಿದೆಯೆಂದು ತಿಳಿಸುತ್ತಾ, ಮೇಲಿನ ಕ್ರಮ ಸಂಖ್ಯೆ 2 ಮತ್ತು 3ರಲ್ಲಿನ ಆಪಾದಿತರ ವಿರುದ್ಧದ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಪ್ರಕರಣವನ್ನು ತಮಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ಮಾಹಿತಿ ಮತ್ತು ದಾಖಲೆಗಳನ್ನು ಪರಿಶೀಲಿಸಿದೆ. ಪ್ರಕರಣದಲ್ಲಿ ಭಾಗಿಯಾಗಿರುವ ಮೇಲ್ಕಂಡ 3 ಜನ ಆಪಾದಿತರು ಪ್ರಶ್ನಿತ ಕಾಮಗಾರಿಯನ್ನು ಮಂಜೂರಾದ ಅಂದಾಜಿನಂತೆ ನಿರ್ವಹಿಸದೇ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿರುವುದು ದಾಖಲೆಗಳಿಂದ ಕಂಡುಬರುತ್ತದೆ. ಹಾಗಾಗಿ ಸದರಿಯವರುಗಳು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ ನಿಯಮ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಇವರುಗಳ ವಿರುದ್ಧದ ಆರೋಪದ ಬಗ್ಗೆ ಶಿಸ್ತು ಕ್ರಮ ಕೈಗೊಳ್ಳುವುದು ಅವಶ್ಯವಿರುತ್ತದೆ.

ಪ್ರಕರಣದಲ್ಲಿ ಭಾಗಿಯಾಗಿರುವ ಶ್ರೀ ಸ್ಯೆಯದ್ ವಾಜಿದ್ ಅಲಿಸವರ್, ಅಧ್ಯಕ್ಷರು, ನಿಡಗುಂದ ಗ್ರಾಮ ಪಂಚಾಯತಿ, ಚಿಂಚೋಳಿ ತಾಲ್ಲೂಕು ಇವರ ವಿರುದ್ಧದ ಆರೋಪಗಳ ಬಗ್ಗೆ ಕರ್ನಾಟಕ ಪಂಚಾಯತ್ ಕಾಯ್ದೆ ಅಡಿಯಲ್ಲಿ ನಿರ್ದೇಶಕರು (ಪಂಚಾಯತ್ ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು ಇವರಿಂದ ಕ್ರಮವಹಿಸಲಾಗುತ್ತಿದೆ. ಇನ್ನುಳಿದ ಇಬ್ಬರು ಆಪಾದಿತ ಅಧಿಕಾರಿ / ನೌಕರರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**<u>ಆದೇಶ ಸಂಖ್ಯೆ : ಗ್ರಾಅಪ 120 ಇಎನ್‌ಕ್ಯೂ 2016 ಬೆಂಗಳೂರು,</u>**
**<u>ದಿನಾಂಕ. 26.10.2016</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಈ ಕೆಳಕಂಡ ಆಪಾದಿತ ಅಧಿಕಾರಿ / ನೌಕರರುಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತ-1ರವರಿಗೆ ವಹಿಸಿ ಆದೇಶಿಸಿದೆ:-

1. ಶ್ರೀ ಹನುಮಂತ ರೆಡ್ಡಿ, ಅಂದಿನ ಕಾರ್ಯದರ್ಶಿ, ನಿಡಗುಂದ ಗ್ರಾಮ ಪಂಚಾಯತಿ, ಚಿಂಚೋಳಿ ತಾಲ್ಲೂಕು.
2. ಶ್ರೀ ರೇವಣಸಿದ್ದಪ್ಪ ಹಗರಗಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿಂಚೋಳಿ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದೇಶ್ ಪೊತ್ತಲಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಇವರಿಗೆ:</u>

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಲಬುರಗಿ.
7. ಉಪ ನಿಬಂಧಕರು ವಿಚಾರಣೆಗಳು-3, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

8. ಶ್ರೀ ಹನುಮಂತ ರೆಡ್ಡಿ, ಅಂದಿನ ಕಾರ್ಯದರ್ಶಿ, ನಿಡಗುಂದ ಗ್ರಾಮ ಪಂಚಾಯತಿ, ಚಿಂಚೋಳಿ ತಾಲ್ಲೂಕು – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಲಬುರಗಿ ಇವರ ಮುಖಾಂತರ.
9. ಶ್ರೀ ರೇವಣಸಿದ್ದಪ್ಪ ಹಗರಗಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿಂಚೋಳಿ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಲಬುರಗಿ ಇವರ ಮುಖಾಂತರ.
10. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
11. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು–ಎ,ಬಿ&ಸಿ).
12. ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾಮ ಪಂಚಾಯತ್ ಶಾಖೆ, ಗ್ರಾ.ಅ.ಪಂ.ರಾಜ್ ಇಲಾಖೆ.
13. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
14. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಕಂಪ್ಯೂಟರ್ ಸೆಲ್.